ಕರ್ನಾಟಕ ಸರ್ಕಾರ
ಸಮಗ್ರ ಮಕ್ಕಳ ರಕ್ಷಣಾ ಯೋಜನೆ

ಸಂ.ಕೆಎಸ್ಐಸಿಪಿಎಸ್/ಕೋವಿಡ್-19/50/2020-21

ನಿರ್ದೇಶನಾಲಯ
ಸಮಗ್ರ ಮಕ್ಕಳ ರಕ್ಷಣಾ ಯೋಜನೆ,
ಬೆಂಗಳೂರು, ದಿನಾಂಕ:23.04.2020

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು
ಜಿಲ್ಲಾ ಮಕ್ಕಳ ರಕ್ಷಣಾ ಘಟಕ,
30 ಜಿಲ್ಲೆಗಳು.

ಮಾನ್ಯರೇ,

ವಿಷಯ: ಕೋವಿಡ್-19ರ ಹಿನ್ನೆಲೆಯಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ನಿರಂತರವಾಗಿ, ಕಡ್ಡಾಯವಾಗಿ ಕೇಂದ್ರಸ್ಥಾನದಲ್ಲಿ ವಾಸ್ತವ್ಯ ಇರುವ ಬಗ್ಗೆ.

*****

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಕೋವಿಡ್-19 ಹಿನ್ನೆಲೆಯಲ್ಲಿ ಎಲ್ಲಾ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿರುವ ಮಕ್ಕಳ ಆರೋಗ್ಯದ ಹಿತದೃಷ್ಟಿಯಿಂದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಾದ ತಾವು ನಿರಂತರವಾಗಿ ಜಾಗರೂಕತೆಯಿಂದ ಇರುವುದು ಅತ್ಯಾವಶ್ಯಕವಾಗಿರುತ್ತದೆ. ಆದರೆ ಕೆಲವು ಜಿಲ್ಲೆಗಳ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಕೇಂದ್ರಸ್ಥಾನದಲ್ಲಿ ಇಲ್ಲದಿರುವುದರ ಬಗ್ಗೆ ಕೆಲವು ದೂರುಗಳು ಪ್ರಧಾನ ಕಛೇರಿಯ ಗಮನಕ್ಕೆ ಬಂದಿದ್ದು, ಇದನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಲಾಗಿದೆ.

ಆದ್ದರಿಂದ ಎಲ್ಲಾ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ನಿರಂತರವಾಗಿ, ಕಡ್ಡಾಯವಾಗಿ ಕೇಂದ್ರಸ್ಥಾನದಲ್ಲಿಯೇ ವಾಸ್ತವ್ಯ ಇರಬೇಕು ಮತ್ತು ತಮ್ಮ ಜಿಲ್ಲೆ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಮಕ್ಕಳ ಪಾಲನಾ ಸಂಸ್ಥೆಗಳಿಗೆ ನಿಯಮಿತವಾಗಿ ಭೇಟಿ ನೀಡಿ ಕೋವಿಡ್-19 ಮುನ್ನೆಚ್ಚರಿಕಾ ಕ್ರಮಗಳು ಅನುಪಾಲನೆಯಾಗುತ್ತಿರುವ ಬಗ್ಗೆ ಎಚ್ಚರವಹಿಸಬೇಕು.

ಅಲ್ಲದೇ ಈ ಕುರಿತು ಅಂದರೆ ಮಾರ್ಚ್ 10, 2020 ರಿಂದ ಏಪ್ರಿಲ್ 20, 2020ರವರೆಗೆ ಇದುವರೆವಿಗೂ ಎಷ್ಟು ಮಕ್ಕಳ ಪಾಲನಾ ಸಂಸ್ಥೆಗಳಿಗೆ [ಎಷ್ಟು ಬಾರಿ] ಸ್ಥಳಭೇಟಿ ಮಾಡಲಾಗಿದೆ ಎಂಬ ಕುರಿತು ಮಾಹಿತಿಯನ್ನು ಲಗತ್ತಿಸಿರುವ ನಿಗದಿತ ನಮೂನೆಯಲ್ಲಿ ಭರ್ತಿ ಮಾಡಿ ದಿನಾಂಕ:25.04.2020ರೊಳಗೆ ಕೇಂದ್ರ ಕಛೇರಿಗೆ ಸಲ್ಲಿಸಲು ಸೂಚಿಸಿದೆ.

ತಮ್ಮ ವಿಶ್ವಾಸಿ,

23.04.2020

ನಿರ್ದೇಶಕರು,
ಸಮಗ್ರ ಮಕ್ಕಳ ರಕ್ಷಣಾ ಯೋಜನೆ,
ಬೆಂಗಳೂರು.

DCPO Inspection Report to ensure COVID-19 Precautions Implementation

From March 10th 2020 to April 20th 2020

| Sl.No. | District Name | Inspected CCI Name | Dates of inspection Done by DCPO | Govt. funded/Private CCI | Intervention Points if any | Action Taken to address intervention | Remarks |
|---|---|---|---|---|---|---|---|
| 1 | 2 | 3 | 4 | 5 | 6 | 7 | 8 |